ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

2

ಇಲಾಖೆ / ವಿಷಯ : DEPARTMENT / SUBJECT: ಆರೋಗ್ಯ.

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ　ದಿನಾಂಕ : DATE : 25/6/2020

ಸಭೆ ಮತ್ತೆ ಲಾಕ್‌ಡೌನ್‌ಗೆ ಕೆಲವರ ಒತ್ತಾಯ

# ಇಂದು ಲಾಕ್‌ಡೌನ್ ಬಗ್ಗೆ ಸಂಪುಟ ಚರ್ಚೆ

## ಲಾಕ್ಡೌನ್, ಇತರ ಆಯ್ಕೆ ಬಗ್ಗೆ ಚರ್ಚಿಸಿ ನಿರ್ಧಾರ

• **ಕನ್ನಡಪ್ರಭ ವಾರ್ತೆ** ಬೆಂಗಳೂರು
ರಾಜ್ಯದಲ್ಲಿ ಅದರಲ್ಲೂ ರಾಜಧಾನಿ ಬೆಂಗಳೂರಿನಲ್ಲಿ ದಿನೇ ದಿನೇ ಹೆಚ್ಚಾಗುತ್ತಿರುವ ಕೋವಿಡ್ ಸೋಂಕು ನಿಯಂತ್ರಿಸಲು ಕೈಗೊಳ್ಳಬೇಕಾದ ಕಠಿಣ ಕ್ರಮಗಳ ಕುರಿತು ಗುರುವಾರ ಬೆಳಗ್ಗೆ 11 ಗಂಟೆಗೆ ನಡೆಯಲಿರುವ ಸಚಿವ ಸಂಪುಟ ಸಭೆಯಲ್ಲಿ ಮಹತ್ವದ ಚರ್ಚೆ ನಡೆಯಲಿದೆ. 'ಮತ್ತೊಮ್ಮೆ ಲಾಕ್‌ಡೌನ್ ಹೇರಬೇಕು' ಎಂಬ ಒತ್ತಾಯದ ಬಗ್ಗೆಯೂ ಸ್ಪಷ್ಟಚಿತ್ರಣಹೊರಬೀಳುವನಿರೀಕ್ಷೆಯಿದೆ.



ಗುರುವಾರದಿಂದಲೇ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಆರಂಭಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ಅನಗತ್ಯ ಗೊಂದಲಗಳಿಗೆ ಅವಕಾಶವಾಗದ ರೀತಿಯಲ್ಲಿ ಮತ್ತು ಆರ್ಥಿಕ ಚಟುವಟಿಕೆಗಳಿಗೆ ಧಕ್ಕೆ ಆಗದ ರೀತಿಯಲ್ಲಿ ಲಾಕ್‌ಡೌನ್ ಮಾಡುವ ಬಗ್ಗೆ ಸಮಾಲೋಚನೆ ನಡೆಸಿ ನಿರ್ಧಾರ ಕೈಗೊಳ್ಳುವ ಸಾಧ್ಯತೆ ಇದೆ.

ಮತ್ತೊಮ್ಮೆ ಲಾಕ್‌ಡೌನ್ ಹೇರುವ ಬಗ್ಗೆ ಸರ್ಕಾರದ ಕೆಲವು ಸಚಿವರಿಗೆ ಒಲವು ಇದ್ದರೂ ಆರ್ಥಿಕಚಟುವಟಿಕೆಹಿನ್ನೆಲೆಪರ್ಯಾಯ ಮಾರ್ಗಗಳನ್ನು ಹುಡುಕುವ ಬಗ್ಗೆ ಹೆಚ್ಚು ಒತ್ತು ನೀಡುವ ಸಂಭವವಿದೆ. ➘

# ಲಾಕ್‌ಡೌನ್ ಬಗ್ಗೆ ಸಂಪುಟ ಚರ್ಚೆ

➘ **ಮೊದಲ ಪುಟದಿಂದ**

ಆಯಾ ಜಿಲ್ಲಾಧಿಕಾರಿಗಳಿಗೆ ಅಥವಾ ತಾಲೂಕು ದಂಡಾಧಿಕಾರಿಗಳಿಗೆ ತಮ್ಮ ವ್ಯಾಪ್ತಿಯಲ್ಲಿ ಸೀಮಿತ ಲಾಕ್‌ಡೌನ್ ಹೇರುವ ಅಧಿಕಾರ ನೀಡುವ ಸಾಧ್ಯತೆಯೂ ಇದೆ ಎನ್ನಲಾಗಿದೆ.

ಕಳೆದ 15 ದಿನಗಳಿಂದ ರಾಜ್ಯದಲ್ಲಿ ಸೋಂಕು ವೇಗವಾಗಿ ಹರಡುತ್ತಿದೆ. ಬೆಂಗಳೂರು, ಬಳ್ಳಾರಿ, ಬೀದರ್, ಕಲಬುರಗಿ, ಯಾದಗಿರಿ ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಹೆಚ್ಚಾಗಿ ಸೋಂಕು ಪ್ರಕರಣಗಳು ಪತ್ತೆಯಾಗುತ್ತಿವೆ. ಸಂಕಷ್ಟದ ಸನ್ನಿವೇಶದಲ್ಲಿ ಮುಂದೆ ಏನು ಎಂಬುದು ಸರ್ಕಾರದ ಚಿಂತನೆ ನಡೆಸಿದೆ. ಅದರಲ್ಲಿಯೂ ಬೆಂಗಳೂರಲ್ಲಿ ಸೋಂಕಿತರ ಸಂಖ್ಯೆ ಹೆಚ್ಚಳವಾಗುತ್ತಿದೆ. ಇದು ಸರ್ಕಾರಕ್ಕೆ ಸಹಜವಾಗಿಯೇ ಆತಂಕಕ್ಕೆ ಕಾರಣವಾಗಿದೆ.

ಲಾಕ್‌ಡೌನ್ ಸಡಿಲಗೊಳಿಸಿದ ಬಳಿಕ ಜನರು ಅನಗತ್ಯವಾಗಿ ಓಡಾಟ ಮಾಡುತ್ತಿದ್ದಾರೆ. ಇದಕ್ಕೆ ಕಡಿವಾಣ ಹಾಕಬೇಕಾಗಿದೆ. ಈ ಹಿನ್ನೆಲೆಯಲ್ಲಿ ರಸ್ತೆಯಲ್ಲಿ ಅನಗತ್ಯ ಜನರ ಓಡಾಟಕ್ಕೆ ಬ್ರೇಕ್ ಪೊಲೀಸ್ ಇಲಾಖೆಗೆ ಹೆಚ್ಚು ಅಧಿಕಾರದ ಬಗ್ಗೆ ಚರ್ಚಿಸುವ ಸಾಧ್ಯತೆ ಇದೆ. ಇದಲ್ಲದೇ, ರಾಜ್ಯದ ಆರ್ಥಿಕ ಚಟುವಟಿಕೆ ನಿಧನವಾಗಿ ಹೆಚ್ಚಳವಾಗುತ್ತಿದ್ದು, ಇದಕ್ಕೆ ಯಾವುದೇ ರೀತಿಯಲ್ಲಿಯೂ ಸಮಸ್ಯೆಯಾಗದಂತೆ ಕ್ರಮ ಕೈಗೊಳ್ಳಬೇಕಾದ ಅನಿವಾರ್ಯತೆ ಸರ್ಕಾರಕ್ಕೆ ಇದೆ. ಹೀಗಾಗಿ ಯಾವ ರೀತಿಯಲ್ಲಿ ಮುಂದಿನ ಹೆಜ್ಜೆ ಇಡಬೇಕು ಎಂಬುದರ ಕುರಿತು ಚರ್ಚಿಸಿ ನಿರ್ಧಾರ ಕೈಗೊಳ್ಳಲಾಗುವುದು ಎಂದು ಮೂಲಗಳು ತಿಳಿಸಿವೆ.